# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 142(26)

ವಿಧಾನ ಪರಿಷತ್ತು ಸದಸ್ಯರ ಹೆಸರು : ಶ್ರೀ ಬಿ.ಜಿ. ಪಾಟೀಲ್

(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 11.08.2025

ಉತ್ತರಿಸುವ ಸಚಿವರು : ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ "ಅನ್ನ ಸುವಿದಾ" ಯೋಜನೆಯನ್ನು ಪ್ರಾರಂಭಿಸಲಾಗಿದೆಯೇ; ಪ್ರಾರಂಭವಾಗದಿದ್ದಲ್ಲಿ, ಈ ಮಹತ್ವಾಕಾಂಕ್ಷೆ ಯೋಜನೆಗೆ ಇರುವ ಅಡೆತಡೆಗಳೇನು; (ವಿವರ ನೀಡುವುದು) | ಅತ್ಯಂತ ದುರ್ಬಲ ವರ್ಗಗಳಿಗೆ ಅಂದರೆ, 75 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ಅವರ ಮನೆ ಬಾಗಿಲಿಗೆ ಪಡಿತರ ವಿತರಣೆಯನ್ನು ಒದಗಿಸುವುದು ಅನ್ನ ಸುವಿಧಾ ಯೋಜನೆಯ ಗುರಿಯಾಗಿರುತ್ತದೆ.<br><br>ಇದನ್ನು ಪ್ರಾಯೋಗಿಕವಾಗಿ ಅಕ್ಟೋಬರ್-2023 ರಿಂದ ಪ್ರಾರಂಭಿಸಿದ್ದು, ಅಕ್ಟೋಬರ್ 2023 ರಿಂದ ಜೂನ್-2024ರವರೆಗೆ ರಾಜ್ಯಾದ್ಯಂತ ಅಂತ್ಯೋದಯ ಪಡಿತರ ಚೀಟಿ (AAY) ಮತ್ತು ಆದ್ಯತಾ ಪಡಿತರ ಚೀಟಿ(PHH) ಫಲಾನುಭವಿಗಳಿಗೆ ಯಶಸ್ವಿಯಾಗಿ ಅವರ ಮನೆ ಬಾಗಿಲಿಗೆ ಪಡಿತರವನ್ನು ವಿತರಣೆ ಮಾಡಲಾಗಿರುತ್ತದೆ.<br><br>ಅನ್ನಸುವಿಧಾ ಯೋಜನೆಗೆ ಅರ್ಹ ಫಲಾನುಭವಿಗಳ ಮಾಹಿತಿಯನ್ನು ಆಧರಿಸಿ, 2025-26ನೇ ಆರ್ಥಿಕ ವರ್ಷದಲ್ಲಿ ಅಗತ್ಯವಿರುವ ಅನುದಾನವನ್ನು ಸದರಿ ಸಾಲಿನ ಆಯವ್ಯಯದಲ್ಲಿ ಬಿಡುಗಡೆಗೊಳಿಸಲಾಗಿರುತ್ತದೆ ಹಾಗೂ ಅನ್ನ ಸುವಿಧಾ ಯೋಜನೆಗೆ ಸಂಬಂಧಿಸಿದ ಮಾಡ್ಯೂಲ್‌ನ್ನು ಆಹಾರ ತಂತ್ರಾಂಶದಲ್ಲಿ ಅಭಿವೃದ್ಧಿ ಪಡಿಸಲು NICಯವರನ್ನು ಕೋರಲಾಗಿರುತ್ತದೆ. ಸದರಿ ಕಾರ್ಯವು ಅಂತಿಮ ಹಂತದಲ್ಲಿದ್ದು, ಸದ್ಯದಲ್ಲಿಯೇ ಜಾರಿಗೊಳಿಸಲಾಗುವುದು. |
| ಆ | ಈ ಯೋಜನೆ ಜಾರಿಗೊಳಿಸಲು ಇರುವ ಅಡೆತಡೆಗಳನ್ನು ನಿವಾರಿಸಲು ಇದುವರೆವಿಗೂ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ; | ಅನ್ನ ಸುವಿಧಾ ಯೋಜನೆಗೆ ಸಂಬಂಧಿಸಿದ ಮಾಡ್ಯೂಲ್‌ನ್ನು ಆಹಾರ ತಂತ್ರಾಂಶದಲ್ಲಿ ಅಭಿವೃದ್ಧಿ ಪಡಿಸಲು NICಯವರನ್ನು ಕೋರಲಾಗಿರುತ್ತದೆ. ಸದರಿ ಕಾರ್ಯವು ಅಂತಿಮ ಹಂತದಲ್ಲಿದ್ದು, ಸದ್ಯದಲ್ಲಿಯೇ ಜಾರಿಗೊಳಿಸಲಾಗುವುದು. |
| ಇ | ಸದರಿ ಜಿಲ್ಲೆಗಳಲ್ಲಿರುವ ಅಶಕ್ತರಿಗೆ ಅನುಕೂಲವಾಗಿರುವ ಈ | |

| | | |
|---|---|---|
| | ಯೋಜನೆಯನ್ನು ವ್ಯವಸ್ಥಿತವಾಗಿ ಜಾರಿಗೊಳಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ? (ವಿವರ ನೀಡುವುದು) | |

**ಆನಾಸ 51 ಎಫ್‌ಪಿಪಿ 2025 (ಇ-ಆಫೀಸ್)**

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ
ಇಲಾಖಾ ಸಚಿವರು